ಕ್ರಮ ಸಂಖ್ಯೆ	ಕಂಪನಿಯ ಹೆಸರು	ಟ್ರಾನ್ಸ್‌ಫಾರ್ಮರ್ ರಿಪೇರಿ ಕೇಂದ್ರಗಳ ಸಂಖ್ಯೆ
1	ಬೆ.ವಿ.ಸ.ಕಂ.	7
2	ಮ.ವಿ.ಸ.ಕಂ.	9
3	ಹು.ವಿ.ಸ.ಕಂ	7
4	ಗು.ವಿ.ಸ.ಕಂ	7
	ಒಟ್ಟು	**30**

ಈ ಕೇಂದ್ರಗಳಲ್ಲಿ ವಿಫಲಗೊಂಡ ಪರಿವರ್ತಕಗಳನ್ನು ತ್ವರಿತವಾಗಿ ರಿಪೇರಿಗೊಳಿಸಿ, ಬದಲಾಯಿಸಲಾಗುತ್ತಿದೆ.

ಅಲ್ಲದೇ, ವಿಫಲವಾದ ಟ್ರಾನ್ಸ್‌ಫಾರ್ಮರ್‌ಗಳ ದುರಸ್ತಿಯನ್ನು ಮತ್ತಷ್ಟು ತ್ವರಿತಗೊಳಿಸುವ ಸಲುವಾಗಿ ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ ಮತ್ತು ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿಗಳು ತಲಾ 3 ಟ್ರಾನ್ಸ್‌ಫಾರ್ಮರ್ ದುರಸ್ತಿ ಕೇಂದ್ರಗಳನ್ನು ಹೆಚ್ಚುವರಿಯಾಗಿ ಸ್ಥಾಪಿಸಲು ಕ್ರಮ ತೆಗೆದುಕೊಳ್ಳುತ್ತಿವೆ.

677(1171) ಶ್ರೀ ಅಪ್ಪಾಸಾಹೇಬ್(ಅಪ್ಪು) ಮಲ್ಲಪ್ಪ ಪಟ್ಟಣಶೆಟ್ಟಿ (ಬಿಜಾಪುರ): ಮಾನ್ಯ ಉಪ ಮುಖ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗೆ ಉತ್ತರಿಸುವರೇ?

ಅ) ರಾಜ್ಯ ಸರ್ಕಾರಿ ನೌಕರರಿಗೆ ಐದನೇ ವೇತನ ಆಯೋಗ ರಚನೆ ಕುರಿತ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಆ) ಹಾಗಿದ್ದಲ್ಲಿ, ಆಯೋಗ ರಚಿಸಲಾಗಿದೆಯೇ;

ಇ) ಇಲ್ಲದಿದ್ದಲ್ಲಿ, ಆಯೋಗವನ್ನು ಎಂದು ರಚಿಸಲಾಗುವುದು?

ಶ್ರೀ ಸಿದ್ದರಾಮಯ್ಯ (ಉಪ ಮುಖ್ಯ ಮಂತ್ರಿಗಳು) :

ಅ) ಇದೆ.

ಆ) ಇಲ್ಲ.

ಇ) ಪೂರ್ವಭಾವಿ ಕ್ರಮಗಳನ್ನು ಶೀಘ್ರದಲ್ಲೇ ಕೈಗೊಳ್ಳಲಾಗುವುದು.

681(1590) ಶ್ರೀ ಅರಗ ಜ್ಞಾನೇಂದ್ರ (ತೀರ್ಥಹಳ್ಳಿ): ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗೆ ಉತ್ತರಿಸುವರೇ?

ಅ) ತೀರ್ಥಹಳ್ಳಿ ತಾಲ್ಲೂಕು ನೊಣಬೂರು ಗ್ರಾಮದಲ್ಲಿ ಸರ್ಕಾರಿ ಪ್ರೌಢಶಾಲೆಯನ್ನು ಖಾಸಗಿಯವರ ಜಾಗದಲ್ಲಿ ಕಟ್ಟಿರುವುದರಿಂದ ಅವರಿಗೆ ಬದಲಿ ಜಾಗ ಕೊಡಲು ಶಿವಮೊಗ್ಗ ಜಿಲ್ಲಾಧಿಕಾರಿಗಳು ಕಳುಹಿಸಿದ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಆ) ಹೌದಾದಲ್ಲಿ ಜಿಲ್ಲಾಧಿಕಾರಿಗಳು ಸರ್ಕಾರಕ್ಕೆ ಪ್ರಸ್ತಾವನೆ ಹಳಿಸಿದ್ದು ಯಾವಾಗ; ಇದುವರೆಗೂ ಸರ್ಕಾರ ಪರ್ಯಾಯ ಭೂಮಿ ನೀಡಲು ಅನುಮತಿ ನೀಡದಿರುವುದಕ್ಕೆ ಕಾರಣ ಏನು; ಅನುಮತಿಯನ್ನು ಯಾವಾಗ ನೀಡಲಾಗುವುದು;